# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 237 | Pages. 2 | Date: 01-09-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 237 - ಪುಟಗಳು : 2 | 01-09-2026 | ಮಂಗಳವಾರ | Ph: 8762954248 | ದರ : ₹1


# ಬೆಳೆ ಸಮೀಕ್ಷೆ: ರೈತರಿಗೆ ಅನ್ಯಾಯವಾಗದಿರಲಿ

## ಅಧಿಕಾರಿಗಳಿಗೆ ಶಾಸಕ ಸಿಮೆಂಟ್ ಮಂಜು ಸೂಚನೆ । ಪೂರ್ವ ಸಿದ್ಧತಾ ಕಾರ್ಯಾಗಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಬೆಳೆ ಸಮೀಕ್ಷೆ ನಡೆಸುವಾಗ ಅಧಿಕಾರಿಗಳು ಹಾಗೂ ಸಮೀಕ್ಷೆದಾರರು ರೈತರ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡಬೇಕು. ವಾಸ್ತವ ಬೆಳೆ ಹಾನಿಯನ್ನು ನಿಖರವಾಗಿ ದಾಖಲಿಸಿ ಸರ್ಕಾರದಿಂದ ದೊರೆಯುವ ಪರಿಹಾರ ಹಾಗೂ ಸೌಲಭ್ಯಗಳಿಂದ ರೈತರು ವಂಚಿತರಾಗದಂತೆ ಎಚ್ಚರ ವಹಿಸಬೇಕು ಎಂದು ಶಾಸಕ ಸಿಮೆಂಟ್ ಮಂಜು ಸೂಚಿಸಿದರು.



ಪಟ್ಟಣದಲ್ಲಿ ಸೋಮವಾರ ಆಯೋಜಿಸಿದ್ದ 2026-27ನೇ ಸಾಲಿನ ಮುಂಗಾರು ಬೆಳೆ ಸಮೀಕ್ಷೆ ಅಂಗವಾಗಿ ಖಾಸಗಿ ಬೆಳೆ ಸಮೀಕ್ಷೆದಾರರು, ಗ್ರಾಮ ಸಹಾಯಕರು ಹಾಗೂ ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಸಂಬಂಧಿತ ಮೇಲ್ವಿಚಾರಕರ ತರಬೇತಿ ಮತ್ತು ಪೂರ್ವಸಿದ್ಧತಾ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರಸಕ್ತ ವರ್ಷ ಹವಾಮಾನ ವೈಪರೀತ್ಯದಿಂದ ರೈತರು ಹಾಗೂ ಕಾಫಿ ಬೆಳೆಗಾರರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಹಿಂದಿನಂತೆ ನಿರ್ದಿಷ್ಟ ಅವಧಿಯಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗುತ್ತಿಲ್ಲ. ಕೆಲವೆಡೆ ಮಳೆ ಕೊರತೆಯಾದರೆ ಇನ್ನೂ ಕೆಲವೆಡೆ ಅಲ್ಪಾವಧಿಯಲ್ಲಿ ಸುರಿಯುವ ಭಾರೀ ಮಳೆಯಿಂದ ಬೆಳೆಗಳಿಗೆ ಹಾನಿಯಾಗುತ್ತಿದೆ. ಕಾಫಿ ಬೆಳೆಯಲ್ಲೂ ಕೊಳೆರೋಗ, ಕಾಯಿ ಉದುರುವಿಕೆ ಸೇರಿ ವಿವಿಧ ಸಮಸ್ಯೆಗಳು ಕಾಣಿಸಿಕೊಂಡಿವೆ. ಈ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದರು.

ಕಾಫಿ ಬೆಳೆಯನ್ನು ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯ ವ್ಯಾಪ್ತಿಗೆ ತರಬೇಕು ಎಂಬುದು ಈ ಭಾಗದ ಬೆಳೆಗಾರರ ಬಹುದಿನಗಳ ಬೇಡಿಕೆಯಾಗಿದೆ. ಈ ಸಂಬಂಧ ಸರ್ಕಾರದೊಂದಿಗೆ ನಿರಂತರವಾಗಿ ಮಾತುಕತೆ ನಡೆಸಲಾಗುತ್ತಿದೆ. ಕಾಫಿ ಬೆಳೆಗಾರರ ಸಂಘಟನೆಗಳ ಪ್ರತಿನಿಧಿಗಳೊಂದಿಗೂ ಚರ್ಚಿಸಲಾಗಿದೆ. ಹವಾಮಾನ ವೈಪರೀತ್ಯದಿಂದ ಕಾಫಿ ಬೆಳೆಗಾರರು ಪದೇ ಪದೇ ನಷ್ಟ ಅನುಭವಿಸುತ್ತಿರುವುದರಿಂದ ವಿಮಾ ರಕ್ಷಣೆ ಅತ್ಯಗತ್ಯ ಎಂದು ಹೇಳಿದರು.

### ವಾಸ್ತವ ಸ್ಥಿತಿಯೇ ದಾಖಲಾಗಲಿ

ಒಂದೇ ಗ್ರಾಮದ ಎಲ್ಲ ರೈತರ ಜಮೀನಿನಲ್ಲೂ ಬೆಳೆ ಪರಿಸ್ಥಿತಿ ಒಂದೇ ರೀತಿಯಾಗಿರುವುದಿಲ್ಲ. ಒಂದು ಜಮೀನಿನಲ್ಲಿ ಬೆಳೆ ಉತ್ತಮವಾಗಿದ್ದರೆ ಪಕ್ಕದ ಜಮೀನಿನಲ್ಲಿ ಹಾನಿಯಾಗಿರಬಹುದು. ಹೀಗಾಗಿ ಮೇಲ್ನೋಟಕ್ಕೆ ಅಥವಾ ಸಾಮೂಹಿಕವಾಗಿ ನಿರ್ಧಾರ ಕೈಗೊಳ್ಳದೆ, ಪ್ರತಿಯೊಬ್ಬ ರೈತನ ಜಮೀನಿನ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿ ಸಮೀಕ್ಷೆ ನಡೆಸಬೇಕು ಎಂದು ಸಮೀಕ್ಷೆದಾರರಿಗೆ ಸೂಚಿಸಿದರು.

ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಬೆಳೆ ಸಮೀಕ್ಷೆಯಲ್ಲಿ ದಾಖಲಾಗುವ ಮಾಹಿತಿಯ ಆಧಾರದಲ್ಲೇ ರೈತರಿಗೆ ವಿವಿಧ ಪರಿಹಾರ ಮತ್ತು ಸರ್ಕಾರಿ ಸೌಲಭ್ಯಗಳು ದೊರೆಯುತ್ತವೆ. ಆದ್ದರಿಂದ ಸಣ್ಣ ಲೋಪವೂ ರೈತರಿಗೆ ಆರ್ಥಿಕ ನಷ್ಟ ಉಂಟುಮಾಡಬಹುದು. ಈ ವಿಚಾರದಲ್ಲಿ ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದರು.

ರೈತರು ಉಳಿದರೆ ಮಾತ್ರ ಸಮಾಜ ಮತ್ತು ಆಡಳಿತ ವ್ಯವಸ್ಥೆ ಉಳಿಯಲು ಸಾಧ್ಯ. ಸರ್ಕಾರ ಎಂದರೆ ಸಾರ್ವಜನಿಕರೇ ಆಗಿದ್ದು, ಸರ್ಕಾರದ ಪ್ರತಿಯೊಂದು ಯೋಜನೆ ಮತ್ತು ಕಾರ್ಯಕ್ರಮವೂ ಬಡವರು ಹಾಗೂ ರೈತರ ಹಿತವನ್ನು ಕಾಪಾಡುವಂತಿರಬೇಕು. ರೈತರಿಗೆ ಸರ್ಕಾರದಿಂದ ದೊರೆಯಬೇಕಾದ ಪ್ರತಿಯೊಂದು ಸೌಲಭ್ಯವೂ ಸಂಪೂರ್ಣವಾಗಿ ತಲುಪುವಂತೆ ಮಾಡುವುದು ಅಧಿಕಾರಿಗಳ ಕರ್ತವ್ಯ ಎಂದು ಹೇಳಿದರು.

> ಈ ಬಾರಿಯ ಅಧಿವೇಶನದಲ್ಲಿ ರೈತಪರ ವಿಷಯಗಳ ಕುರಿತು ಚರ್ಚೆಯಾಗಬೇಕಿತ್ತು. ವಿವಿಧ ಕಾರಣಗಳಿಂದ ಸಾಧ್ಯವಾಗಿಲ್ಲ. ಮುಂದಿನ ಅಧಿವೇಶನದಲ್ಲಿ ಕ್ಷೇತ್ರದ ರೈತರು ಹಾಗೂ ಕಾಫಿ ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳು, ಹವಾಮಾನ ವೈಪರೀತ್ಯದಿಂದ ಉಂಟಾಗುತ್ತಿರುವ ಬೆಳೆ ಹಾನಿ ಮತ್ತು ಪರಿಹಾರಕ್ಕೆ ಸಂಬಂಧಿಸಿದ ವಿಷಯಗಳನ್ನು ಸರ್ಕಾರದ ಗಮನಕ್ಕೆ ತರಲಾಗುವುದು.
>
> **– ಸಿಮೆಂಟ್ ಮಂಜು, ಶಾಸಕ**

ಕಾಫಿ ಸೇರಿದಂತೆ ಕೆಲವು ದೀರ್ಘಾವಧಿ ಬೆಳೆಗಳಿಗೆ ಪ್ರತಿವರ್ಷ ಬೆಳೆ ಸಮೀಕ್ಷೆ ನಡೆಸುವ ಬದಲು ವೈಜ್ಞಾನಿಕವಾಗಿ ಸೂಕ್ತ ಅವಧಿ ನಿಗದಿಪಡಿಸುವ ಬಗ್ಗೆಯೂ ಸರ್ಕಾರ ಚಿಂತನೆ ನಡೆಸಬೇಕು. ಇದರಿಂದ ರೈತರಿಗೆ ಅನುಕೂಲವಾಗುವುದರ ಜತೆಗೆ ಆಡಳಿತಾತ್ಮಕ ಹೊರೆಯನ್ನೂ ಕಡಿಮೆ ಮಾಡಬಹುದು ಎಂದು ಶಾಸಕ ಸಿಮೆಂಟ್ ಮಂಜು ಅಭಿಪ್ರಾಯಪಟ್ಟರು.

ಬೆಳೆ ಸಮೀಕ್ಷೆಯ ಕುರಿತು ರೈತರಿಗೆ ಸಮರ್ಪಕ ಅರಿವು ಮೂಡಿಸುವ ಕೆಲಸವನ್ನು ಕೃಷಿ, ತೋಟಗಾರಿಕೆ ಮತ್ತು ಕಂದಾಯ ಇಲಾಖೆಗಳು ಪರಿಣಾಮಕಾರಿಯಾಗಿ ಕೈಗೊಳ್ಳಬೇಕು ಎಂದು ತಿಳಿಸಿದರು.

ತಾಲೂಕು ಸಹಾಯಕ ಕೃಷಿ ನಿರ್ದೇಶಕ ಪ್ರಕಾಶ್, ಕೃಷಿಕ ಸಮಾಜದ ಅಧ್ಯಕ್ಷ ದೇವರಾಜ್, ಬೆಳೆಗಾರರ ಸಂಘದ ಅಧ್ಯಕ್ಷ ಮೇಘರಾಜ್ ಮತ್ತಿತರರಿದ್ದರು.

# ಬೇಲೂರು: ವಿದ್ಯುತ್ ಸ್ಪರ್ಶಿಸಿ ಹೆಣ್ಣಾನೆ ಸಾವು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: 35 ವರ್ಷದ ಹೆಣ್ಣಾನೆಯೊಂದು ವಿದ್ಯುತ್ ಸ್ಪರ್ಶಿಸಿ ಮೃತಪಟ್ಟಿರುವ ದಾರುಣ ಘಟನೆ ತಾಲ್ಲೂಕಿನ ತಾಲೂಕಿನ ಕೋಗಿಲೆಮನೆ ಗ್ರಾಮದ ಸಮೀಪ ನಡೆದಿದೆ.

ಶಶಿ ಎಂಬುವರ ಜಮೀನಿನಲ್ಲಿ ವಿದ್ಯುತ್ ತಂತಿ ತುಂಡಾಗಿ ನೆಲಕ್ಕೆ ಬಿದ್ದಿತ್ತು. ಭಾನುವಾರ ರಾತ್ರಿ ಕಾಡಾನೆಗಳ ಹಿಂಡು ಆಹಾರ ಅರಸಿ, ಈ ಜಮೀನಿನ ಮೂಲಕ ಸಂಚರಿಸುತ್ತಿದ್ದ ಸಂದರ್ಭದಲ್ಲಿ ಆನೆಯ ಸೊಂಡಿಲಿಗೆ ವಿದ್ಯುತ್ ತಂತಿ ತಗುಲಿದೆ. ಪರಿಣಾಮ ತೀವ್ರ ವಿದ್ಯುತ್ ಪ್ರವಹಿಸಿ ಹೆಣ್ಣಾನೆ ಸ್ಥಳದಲ್ಲೇ ಮೃತಪಟ್ಟಿದೆ.

ಸೋಮವಾರ ಬೆಳಿಗ್ಗೆ ಜಮೀನಿನತ್ತ ತೆರಳಿದ ಸ್ಥಳೀಯರು ಕಾಡಾನೆ ಮೃತಪಟ್ಟಿರುವುದನ್ನು ಗಮನಿಸಿ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿಯುತ್ತಿದ್ದಂತೆ ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದರು.

ವಿದ್ಯುತ್ ತಂತಿ ಹೇಗೆ ತುಂಡಾಗಿ ನೆಲಕ್ಕೆ ಬಿದ್ದಿತ್ತು ಹಾಗು ಘಟನೆಗೆ ಕಾರಣವೇನು ಎಂಬುದರ ಕುರಿತು ಅರಣ್ಯ ಇಲಾಖೆ ಮತ್ತು ಪೊಲೀಸ್ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ವಿದ್ಯುತ್ ಇಲಾಖೆಯ ನಿರ್ಲಕ್ಷ್ಯವೇ ಘಟನೆಗೆ ಕಾರಣವಾಗಿದೆಯೇ ಎಂಬ ಬಗ್ಗೆಯೂ ತನಿಖೆ ಮುಂದುವರಿದಿದೆ.

# ಭಾರತ್ ಜೋಡೋ ಯುವ ಸಂಘಟನೆಗೆ ಆದ್ಯತೆ ನೀಡಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಭಾರತ್ ಜೋಡೋ ಯುವ ಸಂಘಟನೆಗೆ ಸದಸ್ಯರ ಸೇರಿಸಲು ಪಕ್ಷದ ಎಲ್ಲಾ ಮುಖಂಡರು, ಕಾರ್ಯಕರ್ತರು ಶಕ್ತಿಮೀರಿ ಶ್ರಮಿಸಬೇಕು ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ದುದ್ದ ಹಾಗೂ ಶಾಂತಿಗ್ರಾಮ ಹೋಬಳಿಗಳಲ್ಲಿ ಭಾರತ್ ಜೋಡೋ ಸಂಘಗಳ ಸ್ಥಾಪನೆ ಹಾಗೂ ಬಿಎಲ್ಎ-2ಗೆ ಸಂಬಂಧಿಸಿದಂತೆ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿ, ಸಮಾಜದ ಎಲ್ಲಾ ವರ್ಗದ ಜನರನ್ನು ಒಗ್ಗೂಡಿಸುವುದು, ಜನರೊಂದಿಗೆ ನೇರ ಸಂಪರ್ಕ ಬೆಳೆಸುವುದು ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ತಳಮಟ್ಟದಲ್ಲಿ ಮತ್ತಷ್ಟು ಬಲಪಡಿಸುವುದು ಮುಖ್ಯ ಉದ್ದೇಶ. ಪ್ರತಿ ಬೂತ್‌ನಲ್ಲಿಯೂ ಮತದಾರರ ಪಟ್ಟಿಯನ್ನು ಸೂಕ್ಷ್ಮವಾಗಿ ಪರಿಶೀಲಿಸಿ, ಅರ್ಹ ಮತದಾರರ ಹೆಸರುಗಳು ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ಪಟ್ಟಿಯಲ್ಲಿ ಅಗತ್ಯ ತಿದ್ದುಪಡಿಗಳಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಬೇಕು. ಚುನಾವಣಾ ಆಯೋಗದ ಮಾರ್ಗಸೂಚಿಗಳಂತೆ ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಬೂತ್ ಮಟ್ಟದ ಪಕ್ಷದ ಪ್ರತಿನಿಧಿಗಳು ಬಿಎಲ್‌ಒಗಳಿಗೆ ಸಹಕಾರ ನೀಡುವ ಮಹತ್ವದ ಜವಾಬ್ದಾರಿ ಹೊಂದಿದ್ದು, ಈ ನಿಟ್ಟಿನಲ್ಲಿ ಕಾರ್ಯಕರ್ತರು ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ತಿಳಿಸಿದರು.

ಪ್ರತಿ ಬೂತ್‌ನಲ್ಲಿ ಸಂಘಟನೆ, ಪ್ರತಿ ಮನೆಗೆ ಸಂಪರ್ಕ, ಪ್ರತಿಯೊಬ್ಬ ಮತದಾರನಿಗೂ ಗೌರವ ಎಂಬ ಆಶಯದೊಂದಿಗೆ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಪಕ್ಷದ ಸಂಘಟನೆ ತಳಮಟ್ಟದಲ್ಲಿ ಮತ್ತಷ್ಟು ಸದೃಢವಾಗಬೇಕು. ಕಾರ್ಯಕರ್ತರ ಪರಿಶ್ರಮ ಹಾಗೂ ಬದ್ಧತೆಯ ಮೂಲಕ ಜನರ ವಿಶ್ವಾಸವನ್ನು ಗಟ್ಟಿಗೊಳಿಸಬೇಕು ಎಂದು ಮುಖಂಡರು ಹೇಳಿದರು. ಸಭೆಯಲ್ಲಿ ಪಕ್ಷದ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಕೊಲೆಗಾರ ಆರೋಪಕ್ಕೆ ದಾಖಲೆ ಕೊಡಿ: ಬಿ. ಶಿವರಾಂ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಶಾಸಕ ಸುರೇಶ್ ಅವರು ನನ್ನನ್ನು ಕೊಲೆಗಾರ ಎಂದು ಕರೆದಿದ್ದು ಅದಕ್ಕೆ ಸೂಕ್ತ ಸಾಕ್ಷ್ಯಾಧಾರ ಒದಗಿಸಬೇಕು. ಆಧಾರವಿಲ್ಲದ ಆರೋಪಗಳು ಪ್ರಬುದ್ಧ ರಾಜಕಾರಣಿಯ ಮಾತಾಗಲು ಸಾಧ್ಯವಿಲ್ಲ ಎಂದು ಮಾಜಿ ಸಚಿವ ಬಿ.ಶಿವರಾಂ ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಶಾಸಕ ಸ್ಥಾನದಲ್ಲಿರುವವರು ಜವಾಬ್ದಾರಿ ಅರಿತು ಮಾತನಾಡಬೇಕು. ಒಬ್ಬ ವ್ಯಕ್ತಿಯ ಮೇಲೆ ಕೊಲೆಗಾರ ಎಂಬ ಗಂಭೀರ ಆರೋಪ ಮಾಡುವಾಗ ಅದಕ್ಕೆ ದಾಖಲೆ ಮತ್ತು ಸಾಕ್ಷ್ಯ ಇರಬೇಕು. ನನ್ನ ವಿರುದ್ಧ ಮಾಡಿರುವ ಇಂತಹ ಆರೋಪಗಳಿಗೆ ಯಾವುದೇ ಆಧಾರವಿಲ್ಲ. ದಾಖಲೆಗಳಿದ್ದರೆ ಜನರ ಮುಂದೆ ಬಿಡುಗಡೆ ಮಾಡಲಿ ಎಂದು ಸವಾಲು ಹಾಕಿದರು.

ನಾನು ಈ ಕ್ಷೇತ್ರದಲ್ಲಿ ಸುಮಾರು 20 ವರ್ಷಗಳ ಕಾಲ ಜನಪ್ರತಿನಿಧಿಯಾಗಿ ಸೇವೆ ಸಲ್ಲಿಸಿದ್ದೇನೆ. ಗೆದ್ದಿದ್ದೇನೆ, ಸೋತಿದ್ದೇನೆ ಎಂಬುದು ಬೇರೆ ವಿಚಾರ. ಆದರೆ ಇಷ್ಟು ವರ್ಷಗಳ ರಾಜಕೀಯ ಜೀವನದಲ್ಲಿ ನನ್ನ ವಿರುದ್ಧ ಇಂತಹ ಗಂಭೀರ ಆರೋಪಗಳು ಕೇಳಿಬಂದಿರಲಿಲ್ಲ. ಇದೀಗ ಈ ರೀತಿಯ ಹೇಳಿಕೆ ನೀಡಿರುವುದು ಅತ್ಯಂತ ಬೇಜವಾಬ್ದಾರಿಯುತ ನಡೆ. ಆರೋಪಗಳಿಗೆ ದಾಖಲೆ ನೀಡದಿದ್ದರೆ ಅವುಗಳನ್ನು ದುರುದ್ದೇಶಪೂರಿತ ಹಾಗೂ ಬಾಲಿಶ ಹೇಳಿಕೆಗಳೆಂದು ಪರಿಗಣಿಸಬೇಕಾಗುತ್ತದೆ ಎಂದರು.




> ನನ್ನನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ರಾಜಕೀಯ ಸಂಘರ್ಷಕ್ಕೆ ತಳ್ಳುವ ಪ್ರಯತ್ನವನ್ನು ಇಲ್ಲಿನ ಶಾಸಕರು ಮಾಡುತ್ತಿದ್ದಾರೆ. ರಾಜಕೀಯದಲ್ಲಿ ತಮ್ಮ ಸ್ವಾರ್ಥಕ್ಕಾಗಿ ಇಂತಹ ವಾತಾವರಣ ನಿರ್ಮಿಸುವುದು ಸರಿಯಲ್ಲ.
>
> **– ಬಿ.ಶಿವರಾಂ, ಮಾಜಿ ಸಚಿವ**

### ಭ್ರಷ್ಟಾಚಾರ ಸಾಬೀತುಪಡಿಸಿ

ನಾನು ಅಧಿಕಾರದಲ್ಲಿದ್ದ ಅವಧಿಯಲ್ಲಿ ಯಾರಿಂದಾದರೂ ಒಂದೇ ಒಂದು ರೂಪಾಯಿ ಪಡೆದಿದ್ದೇನೆ ಎಂಬುದನ್ನು ದಾಖಲೆಗಳೊಂದಿಗೆ ಸಾಬೀತುಪಡಿಸಲಿ. ಅಧಿಕಾರಿಗಳು, ಗುತ್ತಿಗೆದಾರರು ಅಥವಾ ಸಾರ್ವಜನಿಕರಿಂದ ಹಣ ಪಡೆದಿರುವುದಕ್ಕೆ ಒಂದು ಸಾಕ್ಷ್ಯವಿದ್ದರೂ ಜನರ ಮುಂದೆ ಇಡಲಿ. ಅದಕ್ಕೆ ನಾನು ಉತ್ತರಿಸಲು ಸಿದ್ಧನಿದ್ದೇನೆ. ಶಾಸಕರು ಹುಂಡಿ ಹುಂಡಿ ತಗೊಂಡಿರುವುದಕ್ಕೆ ದಾಖಲೆಗಳಿವೆ ಜೆಜೆಎಂ ಕಾಮಗಾರಿಗಳಲ್ಲಿ ಯಾವ ಇಂಜಿನಿಯರ್ ಬಳಿ ಯಾರು ಹಣ ಪಡೆದಿದ್ದಾರೆ, ಎಲ್ಲೆಲ್ಲಿ ಲೇಔಟ್ ಜಾಗದಲ್ಲಿ ಏನೇನು ತೆಗೆದುಕೊಂಡಿದ್ದಾರೆ ಎಂಬುದರ ಬಗ್ಗೆಯೂ ನನಗೆ ಮಾಹಿತಿ ಮತ್ತು ದಾಖಲೆಗಳಿವೆ. ನಾನು ಆರೋಪಗಳನ್ನು ಮಾಡುವುದಾದರೆ ದಾಖಲೆಗಳೊಂದಿಗೆ ಮಾತನಾಡುತ್ತೇನೆ ಎಂದು ಹೇಳಿದರು.

## ಅಭಿವೃದ್ಧಿ ಪ್ರಶ್ನಿಸುವುದು ತಪ್ಪಾ?

ರುದ್ರೇಶ್‌ಗೌಡರ ವಿರುದ್ಧ ನಾನು ಯಾವುದೇ ವೈಯಕ್ತಿಕ ಆರೋಪ ಮಾಡಿಲ್ಲ. ಅಭಿವೃದ್ಧಿ ಕಾಮಗಾರಿಗಳ ಪ್ರಗತಿ, ಬಿಡುಗಡೆಯಾದ ಅನುದಾನ ಹಾಗೂ ಅಂದಾಜು ಮೊತ್ತಗಳ ಬಗ್ಗೆ ಮಾತ್ರ ಪ್ರಶ್ನೆ ಮಾಡಿದ್ದೇನೆ.

ಜನರ ತೆರಿಗೆ ಹಣದಿಂದ ನಡೆಯುವ ಕಾಮಗಾರಿಗಳ ಬಗ್ಗೆ ಪ್ರಶ್ನಿಸುವುದು ಜನಪ್ರತಿನಿಧಿಯೂ ಸೇರಿದಂತೆ ಪ್ರತಿಯೊಬ್ಬ ನಾಗರಿಕನ ಹಕ್ಕು. ಅದನ್ನು ವೈಯಕ್ತಿಕ ದ್ವೇಷವೆಂದು ಬಿಂಬಿಸುವುದು ಸರಿಯಲ್ಲ. ಇತರರ ನಿಷ್ಠೆ ಪ್ರಶ್ನಿಸುವ ಮೊದಲು ಆತ್ಮಾವಲೋಕನ ಮಾಡಿಕೊಳ್ಳಲಿ.

ತಮ್ಮ ಪಕ್ಷ ನಿಷ್ಠೆಯ ಬಗ್ಗೆ ಮಾತನಾಡುವವರು ಮೊದಲು ರಾಜಕೀಯ ಇತಿಹಾಸವನ್ನು ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ಶಿವರಾಂ ಟಾಂಗ್ ನೀಡಿದರು.

# ವಿದ್ಯಾನಗರದಲ್ಲಿ 14 ಅಡಿ ಮಣ್ಣಿನ ಗಣಪತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಇಲ್ಲಿನ ವಿದ್ಯಾನಗರದ ಕುವೆಂಪು ಯುವಕರ ಸಂಘವು ಈ ಬಾರಿಯ ಗಣೇಶೋತ್ಸವವನ್ನು ಪರಿಸರ ಸ್ನೇಹಿಯಾಗಿ ಆಚರಿಸುವ ಮೂಲಕ ಮಾದರಿಯಾಗುವುದಕ್ಕೆ ಸಜ್ಜಾಗಿದೆ.

ಸಂಘದ ವತಿಯಿಂದ 14 ಅಡಿ ಎತ್ತರದ ಟಿಹಾಸನ್ ಅಧಿರಾಜ್‌ಟಿ ಎಂಬ ಮಣ್ಣಿನ ಗಣಪತಿ ವಿಗ್ರಹವನ್ನು ಸ್ಥಾಪಿಸಲು ಉದ್ದೇಶಿಸಿ ಗಣಪತಿ ಮೂರ್ತಿಯನ್ನು ತರಲು ಸಂಘವು ತೆರಳಿದೆ. ಇನ್ನು ಸೆ. 14ರಂದು ಆರಂಭವಾಗುವ ಈ ಉತ್ಸವವು ಸೆ. 16ರ ವರೆಗೆ ವಿಜೃಂಭಣೆಯಿಂದ ನಡೆಯಲಿದೆ . ವಿದ್ಯಾನಗರ ಜನರ ಸಹಯೋಗದಲ್ಲಿ ಆಯೋಜಿಸಲಾಗಿರುವ ಈ ಕಾರ್ಯಕ್ರಮವು ಪರಿಸರ ಪ್ರಜ್ಞೆಯೊಂದಿಗೆ ಆಚರಣೆಯ ಸಂಕಲ್ಪವನ್ನು ಮತ್ತು ಸಾಂಪ್ರದಾಯಿಕ ನಂಬಿಕೆಯನ್ನು ಸಮನ್ವಯಗೊಳಿಸಿದೆ.

ರಾಜ್ಯ ಸರ್ಕಾರವು ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ರಾಸಾಯನಿಕ ಬಣ್ಣಗಳಿಂದ ತಯಾರಿಸಿದ ವಿಗ್ರಹಗಳ ತಯಾರಿಕೆ, ಸಂಗ್ರಹ, ಮಾರಾಟ ಮತ್ತು ಸಾರ್ವಜನಿಕ ಪ್ರದರ್ಶನದ ಮೇಲೆ ಸಂಪೂರ್ಣ ನಿಷೇಧ ಹೇರಿರುವ ಹಿನ್ನಲೆಯಲ್ಲಿ ಈ ನಿರ್ಧಾರ ಮಹತ್ವ ಪಡೆದುಕೊಂಡಿದೆ . ಸರ್ಕಾರದ ನಿರ್ದೇಶನದಂತೆ ಜಲಮೂಲಗಳನ್ನು ಮಾಲಿನ್ಯದಿಂದ ರಕ್ಷಿಸಲು ಕೃತಕ ಬಣ್ಣವಿಲ್ಲದ, ನೈಸರ್ಗಿಕ ಮಣ್ಣಿನ ವಿಗ್ರಹಗಳ ಸ್ಥಾಪನೆಗೆ ಮಾತ್ರ ಅನುಮತಿ ನೀಡಲಾಗಿದೆ. ಹೀಗಾಗಿ ಕುವೆಂಪು ಯುವಕರ ಸಂಘವು ಸರ್ಕಾರದ ಈ ನಿಯಮವನ್ನು ಪಾಲಿಸುವುದರ ಜೊತೆಗೆ ಪರಿಸರದ ಬಗ್ಗೆ ಸಮುದಾಯದ ಜವಾಬ್ದಾರಿಯನ್ನು ಪ್ರದರ್ಶಿಸಿದೆ.

# ಶಂಕರೇಶ್ವರಸ್ವಾಮಿ ದೇಗುಲದಲ್ಲಿ ಕಳ್ಳತನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಾಲ್ಲೂಕಿನ ಚಿಟ್ಟನಹಳ್ಳಿಯ ಶಂಕರೇಶ್ವರ ದೇವಸ್ಥಾನದ ಬೀಗ ಮುರಿದು ದೇವರ ವಿಗ್ರಹದ ಮೇಲಿದ್ದ ಸುಮಾರು 14.25 ಲಕ್ಷ ರೂ. ಮೌಲ್ಯದ ಚಿನ್ನ ಹಾಗೂ ಬೆಳ್ಳಿ ಆಭರಣ ಕಳವು ಮಾಡಲಾಗಿದೆ.

ಆ. 29ರ ರಾತ್ರಿ ಕಳ್ಳತನ ನಡೆದಿದೆ. ಬೆಳಿಗ್ಗೆ ಅರ್ಚಕರು ಪೂಜೆಗೆಂದು ಹೋದಾಗ ಬಾಗಿಲಿನ ಬೀಗ ಮುರಿದಿರುವುದನ್ನು ಕಂಡಿದ್ದಾರೆ. ಭಕ್ತಾದಿಗಳು ಕೊಟ್ಟಿದ್ದ ಬೆಳ್ಳಿಯ 40 ಛತ್ರಿ, 1 ಬೆಳ್ಳಿ ಹಣೆಪಟ್ಟಿ, 3 ಬೆಳ್ಳಿಯ ನಾಗಾಭರಣ, 3 ಬೆಳ್ಳಿ ಲಿಂಗದ ಕಾಯಿ, 2 ಬೆಳ್ಳಿಯ ನರಿಗೆ, 2 ಬೆಳ್ಳಿಯ ಗಿಳಿ, 2 ಬೆಳ್ಳಿಯ ನಿಂಬೆಹಣ್ಣು, 2 ಬೆಳ್ಳಿಯ ಕೋಡಣಸು, 1 ಬೆಳ್ಳಿ ಮುಖಭಾವ, ಪಾರ್ವತಿ ದೇವರ ಮೂರ್ತಿ ಮೇಲಿದ್ದ 1 ಚಿನ್ನದ ಮಂಗಲ್ಯ ಸರ, 2 ಕಾಸು ಹಾಗೂ 10 ಚಿನ್ನದ ಗುಂಡು ಕಳುವಾಗಿದೆ. ಒಟ್ಟು 35 ಗ್ರಾಂ ತೂಕದ ಚಿನ್ನದ ಆಭರಣ ಕಳುವಾಗಿದೆ. ಅದೇ ದಿನ ಸಮೀಪದ ಚೌಡಮ್ಮ ದೇವಾಲಯದಲ್ಲೂ 1 ಚಿನ್ನದ ಮಾಂಗಲ್ಯ ಸರ, ಚಿನ್ನದ 2 ಕಾಸು, ಚಿನ್ನದ 2 ಗುಂಡು ಕಳುವಾಗಿದೆ. 2 ದೇವಸ್ಥಾನದ ಹುಂಡಿಗಳನ್ನು ಗ್ರಾಮದ ಗಂಗಾಧರಪ್ಪ ಅವರ ಜಮೀನಿನಲ್ಲಿ ಒಡೆದು ಅದರಲ್ಲಿದ್ದ ಹಣವನ್ನು ಕದ್ದಿದ್ದಾರೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮನೆ ಬೀಗ ಮುರಿದು ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಾಲ್ಲೂಕಿನ ಬ್ಯಾಡರಹಳ್ಳಿ ಗ್ರಾಮದ ಮನೆಯೊಂದರಲ್ಲಿ ಹಾಡ ಹಗಲೇ ಬೀರುವಿನಲ್ಲಿಟ್ಟಿದ್ದ 4.95 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳುವಾಗಿದೆ.

ಮನೆ ಮಾಲೀಕ ಬಿ.ಮದನ್ ಅವರು ಆ. 29ರಂದು ಕೆಲಸಕ್ಕೆ ತೆರಳಿದ್ದರು. ತಾಯಿ ಕಮಲ ಅವರು ಮನೆ ಬೀಗ ಹಾಕದೆ ಚಿಲಕ ಮಾತ್ರ ಹಾಕಿ ಹತ್ತಿರದ ಪರಿಚಯಸ್ಥರ ಮನೆಗೆ ತೆರಳಿದ್ದರು. ಸಂಜೆ 5 ಗಂಟೆಗೆ ಪಾನ್ ಕಾರ್ಡ್ ಅನ್ನು ಬೀರುವಿನಲ್ಲಿಡಲು ಹೋದಾಗ ಬಾಗಿಲು ತೆರೆದಿರುವುದು ತಿಳಿದಿದೆ. 1 ಲಾಂಗ್ ನೆಕ್ಲೇಸ್ (30 ಗ್ರಾಂ), ಒಂದು ಶಾರ್ಟ್ ನೆಕ್ಲೇಸ್ (15 ಗ್ರಾಂ), ಒಂದು ಕೊರಳಿನ ಸರ (12 ಗ್ರಾಂ), 2 ಕೈ ಬಳೆಗಳು (20 ಗ್ರಾಂ), ಕಿವಿ ಓಲೆಗಳು ಒಂದು ಜೊತೆ (4 ಗ್ರಾಂ), ಒಂದು ಗುಂಡಿನ ಸರ (5 ಗ್ರಾಂ) ಸೇರಿ ಒಟ್ಟು 86 ಗ್ರಾಂ ತೂಕದ ಆಭರಣ ಕಳುವಾಗಿದೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಾಕಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಜಿಲ್ಲೆಯಲ್ಲಿ ಬಾಕಿ ಇರುವ ನ್ಯಾಯಾಲಯ ಸಂಕೀರ್ಣ ಕಾಮಗಾರಿಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸುವಂತೆ ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ವಿಕಾಸಸೌಧ ಸಭಾಂಗಣದಲ್ಲಿ ಸೋಮವಾರ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿ, ಹೊಸ ನ್ಯಾಯಾಲಯ ಸಂಕೀರ್ಣ ಅರಸೀಕೆರೆ ಮತ್ತು ಚನ್ನರಾಯಪಟ್ಟಣ ತಾಲ್ಲೂಕು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಆವರಣದಲ್ಲಿ ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ ಸಂಕೀರ್ಣ ಕಟ್ಟಡ ಕಾಮಗಾರಿ ಕೈಗೊಳ್ಳಲಾಗಿದೆ. ಸೆ. 20ರಂದು ಅರಸೀಕೆರೆ ಕೋರ್ಟ್ ಉದ್ಘಾಟನೆಗೆ ನಿರ್ದೇಶನ ನೀಡಿದ ಸಚಿವರು, ಅರಸೀಕೆರೆ ಇತಿಹಾಸದಲ್ಲೇ ಒಂದು ಒಳ್ಳೆ ಕೋರ್ಟ್ ನಿರ್ಮಾಣವಾಗುತ್ತಿರುವುದು ಸಂತಸದ ವಿಚಾರ ಎಂದರು.

ಸೆ. 6 ರಂದು ಸಭೆ ಸೇರಿ ಉದ್ಘಾಟನಾ ಕಾರ್ಯಕ್ರಮಗಳ ಅಂತಿಮ ರೂಪುರೇಷೆಗಳನ್ನು ನಿರ್ಧರಿಸೋಣ. ಶೀಘ್ರದಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ತ್ವರಿತಗತಿಯಲ್ಲಿ ಕೆಲಸಗಳನ್ನು ಮಾಡಬೇಕು. ಈಗಾಗಲೇ ಸಾಕಷ್ಟು ತಡವಾಗಿದೆ ವಿಳಂಬ ಧೋರಣೆ ಸಹಿಸುವುದಿಲ್ಲ. ವಿದ್ಯುತ್ ಸಂಪರ್ಕ, ಶೌಚಾಲಯ ಸೇರಿ ಮೂಲಭೂತ ಸೌಕರ್ಯಗಳ ಗುಣಮಟ್ಟವನ್ನು ಕಾಪಾಡುವ ನಿಟ್ಟಿನಲ್ಲಿ ಕ್ರಮವಹಿಸಬೇಕು ಹಾಗೂ ಗುತ್ತಿಗೆದಾರರ ಸಮಸ್ಯೆ ಬಗೆಹರಿಸಲು ಸಿದ್ಧನಿದ್ದೇನೆ ಎಂದು ತಿಳಿಸಿದರು.

ಜಿಲ್ಲೆಯ ಜ್ವಲಂತ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಆದ್ಯತೆ ನೀಡಿದ್ದೇನೆ, ಪ್ರಮುಖವಾಗಿ ವಿಮಾನ ನಿಲ್ದಾಣ, ಜಿಲ್ಲಾಧಿಕಾರಿ ಕಚೇರಿ ಉದ್ಘಾಟನೆ ಮತ್ತಿತರ ಮಹತ್ವದ ಕಾರ್ಯಕ್ರಮಗಳನ್ನು ನಡೆಸುವ ನಿಟ್ಟಿನಲ್ಲಿ ಗಮನಹರಿಸಬೇಕಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ನ್ಯಾಯವಾದಿಗಳ ಪ್ರತಿನಿಧಿಗಳು ಮತ್ತಿತರರು ಹಾಜರಿದ್ದರು.

# ಅಡಗೂರಿನಲ್ಲಿ ಚತುರ್ಮುಖ ಜಿನಬಿಂಬ ಪ್ರತಿಷ್ಠಾಪನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಳೇಬೀಡು: ಹೊಯ್ಸಳರ ಕಾಲದಲ್ಲಿ ಅಡಗೂರು ಬಳಿಯ ರಾಶಿಗುಡ್ಡದಲ್ಲಿ ಸಂಭವಿಸಿದ ಜ್ವಾಲಾಮುಖಿಯನ್ನು ಶ್ರವಣಬೆಳಗೊಳದ ಶುಭಚಂದ್ರ ಮುನಿ ಮಹಾರಾಜರು ಆನೆಯ ಮೇಲೆ ಕೂಷ್ಮಾಂಡಿನಿ ಮಾತೆಯನ್ನು ಕರೆತಂದು ವಿವಿಧ ಪೂಜಾ ವಿಧಾನ ನಡೆಸಿ ಶಮನಗೊಳಿಸಿದರು. ಆದ್ದರಿಂದ ಹೊಯ್ಸಳ ರಾಜರು ಸ್ವಾಮೀಜಿಗೆ ಚಾರುಕೀರ್ತಿ ಎಂಬ ಬಿರುದು ನೀಡಿದರೆಂದು ಶ್ರವಣಬೆಳಗೊಳ ಅಭಿನವ ಚಾರುಕೀರ್ತಿ ಭಟ್ಟಾರಕ ಪಟ್ಟಾಚಾರ್ಯವರ್ಯ ಸ್ವಾಮೀಜಿ ಹೇಳಿದರು.

ಬೇಲೂರು ತಾಲ್ಲೂಕು ಅಡಗೂರಿನಲ್ಲಿ ನಡೆದ ಮಾನಸ್ತಂಭ ಮಂಟಪದಲ್ಲಿ ಚತುರ್ಮುಖ ಜಿನಬಿಂಬ ಪ್ರತಿಷ್ಠಾಪನೆ ಮತ್ತು ಪುಣ್ಯ ಪ್ರಭಾವನೆ ಕಾರ್ಯಕ್ರಮದಲ್ಲಿ ಮಾತನಾಡಿ, ಶ್ರವಣಬೆಳಗೊಳ ಹಾಗೂ ಅಡಗೂರು ಗ್ರಾಮಕ್ಕೆ ಐತಿಹಾಸಿಕ ಮಹತ್ವದ ಸಂಬಂಧವಿದೆ.

ಹೀಗಾಗಿ ಅಡಗೂರು ಚಾರುಕೀರ್ತಿ ಪೀಠ ಸ್ಥಾಪನೆಗೆ ಕಾರಣವಾಗಿದೆ ಎಂದರು.

ಅಡಗೂರಿನವರಾದ ದೇವಪ್ಪ ಮುನಿಗಳಿಗೆ



ಶ್ರವಣಬೆಳಗೊಳದಲ್ಲಿ ಮುನಿ ದೀಕ್ಷೆ ನಡೆದಿದೆ ಎಂಬುದಕ್ಕೆ ದಾಖಲೆಗಳಿವೆ. ಅಡಗೂರು ಜಿನಮಂದಿರ ಆವರಣದಲ್ಲಿರುವ ದೇವಪ್ಪ ಸ್ವಾಮಿ ಅವರ ಪಾದಗಳಿಗೆ ಶರವಣಬೆಳಗೊಳ ಮಠದಿಂದ ಶಿಲಾಮಯ ಮಂಟಪ ನಿರ್ಮಿಸಿಕೊಡುತ್ತೇವೆ. ಒಂದು ಕಾಲದಲ್ಲಿ ಕರ್ನಾಟಕದಲ್ಲಿ ಜೈನ ಧರ್ಮ ಪ್ರಬಲವಾಗಿತ್ತು. ಹಾಸನ ಜಿಲ್ಲೆ ಒಂದರಲ್ಲಿಯೇ ಸಾವಿರಾರು ಜಿನ ಮಂದಿರಗಳು ನೆಲಸಮಗೊಂಡಿವೆ. ಈಗ ಜೈನ ಯುವಕರು ಧರ್ಮ ರಕ್ಷಣೆಗೆ ಮುಂದಾಗಬೇಕು. ಜೈನ ಕ್ಷೇತ್ರ, ಜಿನ ಮಂದಿರ, ಜಿನ ಮೂರ್ತಿ ಹಾಗೂ ಜೈನ ಶಾಸನಗಳನ್ನು ರಕ್ಷಣೆ ಮಾಡಬೇಕು. ಅಡಗೂರಿನ ಜೈನ ಸಮಾಜದಲ್ಲಿ ಹಿರಿಯರು, ಕಿರಿಯರು, ಮಹಿಳೆ, ಪುರುಷರೆನ್ನದೆ ಎಲ್ಲರೂ ಒಗ್ಗಟ್ಟಿನಿಂದ ಧರ್ಮ ಜಾಗೃತಿಯಲ್ಲಿ ಪಾಲ್ಗೊಂಡಿರುವುದು ಶ್ಲಾಘನೀಯ ಎಂದರು.

ಜೈನಮುನಿ ವೀರಸಾಗರ ಮುನಿಮಹಾರಾಜ್ ಮಾತನಾಡಿ, ಜಿನಮೂರ್ತಿ ಪ್ರತಿಷ್ಠಾಪನೆ ಹಾಗು ಅಭಿಷೇಕ ಮಾಡುವುದರಿಂದ ಪುಣ್ಯಪ್ರಭಾವನೆ ಆಗುತ್ತದೆ. ಜಿನಮೂರ್ತಿ ಪ್ರತಿಷ್ಠಾಪನೆ ಮಾಡಿದವರಿಗೆ ಮಾತ್ರವಲ್ಲದೆ, ಜಿನಮಂದಿರ ಹಾಗೂ ಬಿಂಬಗಳನ್ನು ದಾನ ಮಾಡಿದವರಿಗೂ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದರು.

ಪ್ರಮುಖರಾದ ಎ.ಎಸ್.ನಾಗೇಂದ್ರ ಕುಮಾರ್, ಶಾಮಲ ಜಿನರಾಜಯ್ಯ, ಡಾ.ನಿರಜಾ ನಾಗೇಂದ್ರ ಕುಮಾರ್, ಶಶಿಕುಮಾರ್, ಧವನ್ ಜೈನ್, ಎ.ಬಿ.ಕಾಂತರಾಜು, ಪುಷ್ಪ ರತ್ನರಾಜು, ಸುಧಾ ವಿಜಯ್ ಕುಮಾರ್, ಪ್ರಾಧ್ಯಾಪಕ ಎ.ಪಿ.ಪವನ್ ಕುಮಾರ್, ನಿಶ್ಚಲ ಸನತ್ ಕುಮಾರ್ ಪಾಲ್ಗೊಂಡಿದ್ದರು.

ಮುನಿಶ್ರೀ ವೀರಸಾಗರ ಮಹಾರಾಜರು ಹಾಗು ಅಭಿನವ ಚಾರುಕೀರ್ತಿ ಭಟ್ಟಾರಕ ಪಟ್ಟಚಾರ್ಯವರ್ಯ ಸ್ವಾಮೀಜಿ ಅವರ ಸಮ್ಮುಖದಲ್ಲಿ ಪ್ರತಿಷ್ಠಾಪನಾ ಮಹೋತ್ಸವ ನಡೆಯಿತು. ಊರಿನ ಜೈನ ಯುವಕರು ಚತುರ್ಮುಖ ಜಿನಬಿಂಬ ಪ್ರತಿಷ್ಠಾಪಿಸಿದರು.

ಚತುರ್ಮುಖ ಜಿನ ಬಿಂಬಗಳಿಗೆ 108 ಕಳಸದ ಜಲ, ಗಂಧ, ಎಳನೀರು, ಕಷಾಯ, ಕಬ್ಬಿನ ಹಾಲು, ಅರಿಶಿಣ, ಚಂದನ, ಕಲ್ಕಚೂರ್ಣ ಹಾಗು ವಿವಿಧ ಪುಷ್ಪಗಳಿಂದ ಜಿನ ಬಿಂಬಗಳಿಗೆ ಅಭಿಷೇಕ ನೆರವೇರಿಸಲಾಯಿತು. ಚತುಷ್ಕೋನ ಹಾಗು ಪೂರ್ಣ ಕಳಸದ ಅಭಿಷೇಕ ನೆರವೇರಿಸಿದ ನಂತರ ಜಗತ್ತಿನ ಸಕಲ ಜೀವಿಗಳಿಗೆ ಶಾಂತಿ, ನೆಮ್ಮದಿ ಮುಕ್ತಿ ದೊರಕಲಿ ಎಂದು ಪ್ರಾರ್ಥಿಸಿ ಚತುರ್ಮುಖ ಜಿನ ಬಿಂಬಗಳಿಗೆ ಶಾಂತಿಧಾರೆ ನೆರವೇರಿಸಲಾಯಿತು.

# ಬೇಲೂರಿನಲ್ಲಿ ಶ್ರದ್ಧಾ ಭಕ್ತಿಯ ಗುರು ರಾಯರ ಆರಾಧನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಗುರು ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವವು ನೂರಾರು ಭಕ್ತರ ಸಮ್ಮುಖದಲ್ಲಿ ಪಟ್ಟಣದ ಕೋಟೆ ಶ್ರೀ ರಾಘವೇಂದ್ರ ಮಠದಲ್ಲಿ ಶ್ರದ್ಧಾಭಕ್ತಿಯಿಂದ ನೆರವೇರಿತು.

ಕೋಟೆ ಶ್ರೀ ರಾಘವೇಂದ್ರ ಮಠದ ಪುರೋಹಿತ ಸುಧೀಂದ್ರಚಾರ್ ಮಾತನಾಡಿ, 355 ವರ್ಷಗಳ ಹಿಂದೆ ಗುರು ರಾಘವೇಂದ್ರ ಸ್ವಾಮೀಜಿ ಸಶರೀರವಾಗಿ ಬೃಂದಾವನಸ್ಥರಾಗಿ ಜಪ, ತಪ, ಅನುಷ್ಠಾನಗಳ ಮೂಲಕ ಅಪಾರ ಪುಣ್ಯ ಸಂಪಾದಿಸಿದ್ದು ಇಂದಿಗೂ ಭಕ್ತರಿಗೆ ತಮ್ಮ ಅನುಗ್ರಹ ಕರುಣಿಸುತ್ತಿದ್ದಾರೆ. ಗುರುಗಳ ಅನುಗ್ರಹ ಪಡೆಯಲು ಭಕ್ತರು ಶ್ರದ್ಧೆ, ಭಕ್ತಿಯಿಂದ ನೃತ್ಯ, ಸಂಗೀತ, ಭಜನೆ, ಹೆಜ್ಜೆ ಸೇವೆ, ಪಾದ ಸೇವೆ, ದೀಪ ಸೇವೆ, ಉರುಳು ಸೇವೆ ಸೇರಿ ವಿವಿಧ ಸೇವೆಗಳನ್ನು ಸಲ್ಲಿಸುತ್ತಾರೆ. ಭಕ್ತರ ನಂಬಿಕೆಗನುಗುಣವಾಗಿ ಗುರು ರಾಘವೇಂದ್ರ ಸ್ವಾಮಿಗಳ ಅನುಗ್ರಹ ದೊರೆಯುತ್ತದೆ. ಜಾತಿ, ಮತದ ತಾರತಮ್ಯವಿಲ್ಲದೆ ಎಲ್ಲರಿಗೂ ಅನುಗ್ರಹ ನೀಡಿದ ಗುರು ರಾಘವೇಂದ್ರ ಸ್ವಾಮಿಗಳನ್ನು ಜಗದ್ಗುರು ಎಂದು ಭಕ್ತರು ಗೌರವಿಸುತ್ತಾರೆ ಎಂದು ಹೇಳಿದರು.



ರಾಘವೇಂದ್ರ ಸ್ವಾಮಿ ಮಹಿಮೆ ಅಪಾರವಾಗಿದ್ದು, ಕಲಿಯುಗದಲ್ಲಿ ಗುರುಗಳ ರೂಪದಲ್ಲಿ ರಾಯರ ಅನುಗ್ರಹ ಪಡೆಯುವುದು ಭಕ್ತರಿಗೆ ಪುಣ್ಯದಾಯಕವಾಗಿದೆ. ಪ್ರತಿವರ್ಷ ಆರಾಧನಾ ಮಹೋತ್ಸವವನ್ನು ಭಕ್ತರ ಸಹಕಾರದೊಂದಿಗೆ ವಿಶೇಷವಾಗಿ ಆಚರಿಸಲಾಗುತ್ತಿದೆ. ವಿಶೇಷ ಪೂಜೆ, ಪಂಚಾಮೃತ, ಫಲಾಮೃತ ಅಭಿಷೇಕ, ಹೂವಿನ ಅಲಂಕಾರ ಸೇರಿ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಮಸ್ತ ಭಕ್ತಾದಿಗಳಿಗೆ ಪ್ರಸಾದ ರೂಪದಲ್ಲಿ ಅನ್ನಸಂತರ್ಪಣೆಯ ವ್ಯವಸ್ಥೆ ಮಾಡಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಗುರು ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದು, ಆರಾಧನಾ ಮಹೋತ್ಸವದಲ್ಲಿ ಪಾಲ್ಗೊಂಡು ಅನುಗ್ರಹಕ್ಕೆ ಪಾತ್ರರಾಗಬೇಕು ಎಂದರು.

# ಜಿಲ್ಲಾದ್ಯಂತ ರಾಘವೇಂದ್ರ ಸ್ವಾಮಿ ಆರಾಧನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗುರು ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವವನ್ನು ನಗರ ಸೇರಿ ಜಿಲ್ಲಾದ್ಯಂತ ಭಾನುವಾರ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ನಗರದ ಎಂ.ಜಿ. ರಸ್ತೆಯಲ್ಲಿರುವ ಗುರು ರಾಘವೇಂದ್ರ ಮಠದಲ್ಲಿ ಬೆಳಿಗ್ಗೆಯಿಂದ ಸಂಜೆ ವರೆಗೆ ಭಕ್ತರು ಸರದಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಮುಂಜಾಗ್ರತಾ ಕ್ರಮವಾಗಿ ಬ್ಯಾರಿಕೇಡ್ ಅಳವಡಿಸಿ ವಾಹನ ಸಂಚಾರ ನಿಷೇಧಿಸಲಾಗಿತ್ತು. ಸಂಚಾರ ಠಾಣೆ ಪೊಲೀಸರು ಸಂಜೆವರೆಗೂ ಮೊಕ್ಕಾಂ ಹೂಡಿದ್ದರು.

ಗುರುರಾಯರ ಆರಾಧನಾ ಮಹೋತ್ಸವದ ಪ್ರಮುಖ ಘಟ್ಟವಾದ ಮಧ್ಯಾರಾಧನೆ, ವಿಶೇಷ ಪೂಜೆ, ಅಭಿಷೇಕ ನೆರವೇರಿತು. ಶ್ರೀ ಮಠದ ಪ್ರಾಂಗಣ ಹಾಗೂ



ಮುಂಭಾಗ ತರಹೇವಾರಿ ಬಣ್ಣಗಳ ವಿದ್ಯುತ್ ದೀಪಗಳು ಹಾಗೂ ನವೀನ ಮಾದರಿಯಲ್ಲಿ ಹಣ್ಣು ತರಕಾರಿ ಮತ್ತು ಹೂವಿನ ಅಲಂಕಾರ ಮಾಡಲಾಗಿತ್ತು.

ಚನ್ನರಾಯಪಟ್ಟಣದ ಕೋಟೆ ರಾಘವೇಂದ್ರ ಸ್ವಾಮಿ ಮಠದಲ್ಲೂ ವಿಶೇಷ ಪೂಜೆಗಳು ನಡೆದವು. ತಾಲ್ಲೂಕಿನ ವಿವಿಧೆಡೆಗಳಿಂದ ಆಗಮಿಸಿದ ಸಾವಿರಾರು ಭಕ್ತ ಸಮೂಹ ರಾಯರ ದರ್ಶನ ಪಡೆದರು. ಮಠದಲ್ಲಿ ಹಬ್ಬದ ಸಂಭ್ರಮ ಮನೆ ಮಾಡಿ ಆವರಣದಲ್ಲಿ ಭಕ್ತರಿಗಾಗಿ ವಿವಿಧ ವ್ಯವಸ್ಥೆಗಳನ್ನು ಮಾಡಲಾಗಿತ್ತು.

ರಾಯರ 355ನೇ ಆರಾಧನಾ ಮಧ್ಯಾರಾಧನೆ ನಿಮಿತ್ತ ಶ್ರೀ ವಾಸುದೇವಾಚಾರ್ ಮತ್ತು ಜಿ.ಎಸ್.ವಾದಿರಾಜ ಆಚಾರ್ಯರ ನೇತೃತ್ವದಲ್ಲಿ ಮುಂಜಾನೆ ಉಷಾಕಾಲ ಪೂಜೆ ಧಾರ್ಮಿಕ ಕಾರ್ಯಗಳು ಆರಂಭವಾದವು. ಮಧ್ಯಾರಾಧನೆಯ ದಿನ ಭಕ್ತರಿಗೆ ವಿಶೇಷ ಅನುಗ್ರಹ ದೊರೆಯುತ್ತದೆ ಎಂಬ ಪ್ರತೀತಿ ಇದೆ. ಪ್ರತಿನಿತ್ಯದ ಪಂಚಾಮೃತ ಅಭಿಷೇಕಕ್ಕಿಂತ ಹತ್ತುಪಟ್ಟು ಹೆಚ್ಚು ಪದಾರ್ಥಗಳನ್ನ ಬಳಸಲಾಗುತ್ತದೆ. ಹಾಲು, ಮೊಸರು, ತುಪ್ಪ, ಜೇನು ತುಪ್ಪ, ಹಣ್ಣು, ಗೋಡಂಬಿ, ಒಣದ್ರಾಕ್ಷಿ ಸೇರಿ ವಿವಿಧ ಪದಾರ್ಥಗಳಿಂದ ಪಂಚಾಮೃತ ಅಭಿಷೇಕ, ಬಳಿಕ ರಜತ ಕವಚದೊಂದಿಗೆ ಅಲಂಕಾರ. ರಾಯರ ಪಾದಪೂಜೆ ಹಾಗೂ ಬೃಂದಾವನಕ್ಕೆ ಹೂ ಅಲಂಕಾರ ನೆರವೇರಿತು. ಜೊತೆಯಲ್ಲಿ ಅಲಂಕಾರ ಪಂಕ್ತಿಯ ಬ್ರಾಹ್ಮಣ ಪೂಜೆ ಮತ್ತು ಮಹಾಮಂಗಳಾರತಿ ಇನ್ನಿತರ ಧಾರ್ಮಿಕ ಕಾರ್ಯಗಳು ವಿಧಿವತ್ತಾಗಿ ಸಂಪನ್ನಗೊಂಡವು.

ಸಂಜೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಶ್ರೀ ಕಲಾಸರಸ್ವತಿ ನೃತ್ಯನಿಕೇತನ, ಕು.ಅಶ್ವಿನಿ ಅವರಿಂದ ಭರತನಾಟ್ಯ ಕಾರ್ಯಕ್ರಮ ನೆರವೇರಿತು. ಬಳಿಕ ಮಠದ ಪ್ರಾಕಾರದಲ್ಲಿ ಚಿನ್ನದ ರಥೋತ್ಸವ ಮಹಾಮಂಗಳಾರತಿ, ನಂತರ ತೀರ್ಥ ಪ್ರಸಾದ ವಿನಿಯೋಗ ಜರಗಿತು. ಶ್ರೀಮಠಕ್ಕೆ ಭಕ್ತರು ಶ್ರದ್ಧಭಕ್ತಿಪೂರ್ವಕವಾಗಿ ನಮನ ಸಲ್ಲಿಸಿ ಗುರುಗಳ ದರ್ಶನ ಪಡೆದರು.

# ಆಧುನಿಕ ಜೀವನ ಶೈಲಿಯಿಂದ ಸೋಮಾರಿತನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಆಧುನಿಕ ಜೀವನ ಶೈಲಿ ಮನುಷ್ಯನನ್ನು ಸೋಮಾರಿಯನ್ನಾಗಿ ಮಾಡುತ್ತಿದ್ದು ನೆಮ್ಮದಿಯ ಜೀವನ ಕಟ್ಟಿಕೊಳ್ಳಬೇಕೆಂದರೆ ನಿತ್ಯ ವ್ಯಾಯಾಮ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

ಲಯನ್ಸ್ ಸಂಸ್ಥೆಯಿಂದ ನಗರದಲ್ಲಿ ಹಮ್ಮಿಕೊಂಡಿದ್ದ ಸಿಂಹ ನಡಿಗೆ 2026 ವಾಕಥಾನ್‌ಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಮಾತನಾಡಿ, ಒಂದಲ್ಲ ಒಂದು ರೀತಿಯಲ್ಲಿ ಮನುಷ್ಯನನ್ನು ಆರೋಗ್ಯ ಸಮಸ್ಯೆ ಕಾಡುತ್ತಿದೆ. ಆರೋಗ್ಯವಂತರಾಗಿ ನೆಮ್ಮದಿಯ ಜೀವನ ನಡೆಸಬೇಕಾದರೆ ಪ್ರತಿಯೊಬ್ಬರು ತಮ್ಮ ದಿನಚರಿಯ ಒಂದೆರಡು ಗಂಟೆಯನ್ನು ನಡಿಗೆ,




ವ್ಯಾಯಾಮ ಅಥವಾ ಆಟೋಟಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಆರೋಗ್ಯವಂತ ಸಮಾಜದಿಂದ ಮಾತ್ರ ಸದೃಢ ದೇಶ ನಿರ್ಮಾಣ ಸಾಧ್ಯ. ಸಮಾಜವನ್ನು ಜಾಗೃತಿಗೊಳಿಸುವ ನಿಟ್ಟಿನಲ್ಲಿ ಲಯನ್ಸ್ ಸಂಸ್ಥೆ ಹಮ್ಮಿಕೊಂಡಿರುವ ಸಿಂಹ ನಡಿಗೆ ಔಚಿತ್ಯ ಕಾರ್ಯಕ್ರಮವಾಗಿದೆ. ಮುಂದಿನ ದಿನಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಕಾರ್ಯಕ್ರಮ ಆಯೋಜಿಸಬೇಕಕು. ಅದಕ್ಕೆ ವೈಯಕ್ತಿಕ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ತಹಶೀಲ್ದಾರ್ ಸಂತೋಷ್ ಕುಮಾರ್ ಮಾತನಾಡಿ, ಆರೋಗ್ಯ, ಪರಿಸರ ಮಹತ್ವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಲಯನ್ಸ್ ಸಂಸ್ಥೆ ಆಯೋಜಿಸಿರುವ ಜಾಗೃತಿ ಜಾಥಾ ಹೆಮ್ಮೆಯ ಕೆಲಸ. ಇದೇ ರೀತಿ ಎಲ್ಲಾ ಸಂಘಟನೆಗಳು ಅರ್ಥಪೂರ್ಣ ಕಾರ್ಯಕ್ರಮಗಳನ್ನು ಆಯೋಜಿಸಬೇಕೆಂದು ಸಲಹೆ ನೀಡಿದರು.

## ವಿದ್ಯಾರ್ಥಿಗಳ ಅತ್ಯುತ್ಸಾಹ

ವಿದ್ಯಾರ್ಥಿಗಳು, ಮಹಿಳೆಯರು ಅತ್ಯುತ್ಸಾಹದಿಂದ ಜಾಥಾದಲ್ಲಿ ಭಾಗಿಯಾದರು. ಶ್ವೇತ ವರ್ಣದ ಸಮವಸ್ತ್ರದೊಂದಿಗೆ ನೂರಾರು ಸಂಖ್ಯೆಯಲ್ಲಿ ಜೂನಿಯರ್ ಕಾಲೇಜ್ ಮುಂಭಾಗ ಸೇರಿದ ನಗರದ ಜನರು ಟಿಹೆಚ್ ರಸ್ತೆಯಿಂದ ತಾಲ್ಲೂಕು ಕಚೇರಿ ವರೆಗೆ ಕಾಲ್ನಡಿಗೆಯಲ್ಲಿ ಬಂದು ಕಾರ್ಯಕ್ರಮ ಸಂಪನ್ನಗೊಳಿಸಿದರು.

ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಹೆಜ್ಜೆ ಹಾಕಿದರು. ನಗರಸಭೆ ಮಾಜಿ ಅಧ್ಯಕ್ಷ ಎಂ.ಸಮೀವುಲ್ಲಾ, ಮಾಜಿ ಸದಸ್ಯ ದರ್ಶನ್, ಲಯನ್ಸ್ ಸಂಸ್ಥೆ ಪದಾಧಿಕಾರಿಗಳಾದ ಮಂಜಣ್ಣ, ವೆಂಕಟೇಶ್, ಸತೀಶ್, ಪರಮೇಶ್, ಶಿವಕುಮಾರ್, ಅಂತರಾಷ್ಟ್ರೀಯ ಮ್ಯಾರಥಾನ್ ಕ್ರೀಡಾಪಟು ಗುರುಪ್ರಸಾದ್ ಮೊದಲಾದವರಿದ್ದರು.

# ಎ.ಟಿ.ರಾಮಸ್ವಾಮಿ ಸಕ್ರಿಯ ರಾಜಕಾರಣಕ್ಕೆ ಮರಳಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಮಾಜಿ ಶಾಸಕ ಎ.ಟಿ. ರಾಮಸ್ವಾಮಿ ಅವರು ಮತ್ತೆ ಸಕ್ರಿಯ ರಾಜಕಾರಣದಲ್ಲಿ ತೊಡಗಿಸಿಕೊಂಡು ಜನರ ಸೇವೆಗೆ ಮುಂದಾಗಬೇಕೆಂದು ಅವರ ಅಭಿಮಾನಿಗಳು ಒತ್ತಾಯಿಸಿದರು.

ತಾಲ್ಲೂಕಿನ ಮುಗಳೂರು ಗ್ರಾಮದ ಸಮುದಾಯ ಭವನದಲ್ಲಿ ನಡೆದ ಎ.ಟಿ. ರಾಮಸ್ವಾಮಿ ಅವರ ಅಭಿಮಾನಿಗಳು ಹಾಗು ಬೆಂಬಲಿಗರ ಸಭೆಯಲ್ಲಿ ಮಾತನಾಡಿದ ಮುಖಂಡರು, ರಾಮಸ್ವಾಮಿ ಅವರು ರಾಜಕೀಯದಿಂದ ದೂರ ಉಳಿಯದೆ ಮುಂದಿನ ದಿನಗಳಲ್ಲಿ ಸಕ್ರಿಯವಾಗಿ ಜನರೊಂದಿಗೆ ಬೆರೆತು ಕ್ಷೇತ್ರದ ಅಭಿವೃದ್ಧಿ ಮತ್ತು ಜನಪರ ಹೋರಾಟಗಳಲ್ಲಿ ತೊಡಗಿಸಿಕೊಳ್ಳಬೇಕೆಂದು ಆಗ್ರಹಿಸಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಎಂ.ಟಿ.ಪಾಂಡುರಂಗ ಮಾತನಾಡಿ,



ಅಭಿವೃದ್ಧಿ ವಿಚಾರದಲ್ಲಿ ಎ.ಟಿ.ರಾಮಸ್ವಾಮಿ ಅವರು ಸದಾ ಮುಂಚೂಣಿಯಲ್ಲಿದ್ದವರು. ತಮ್ಮ ಅಧಿಕಾರಾವಧಿಯಲ್ಲಿ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದು, ಹಲವು ಗ್ರಾಮಗಳಿಗೆ ಕಾಂಕ್ರೀಟ್ ರಸ್ತೆ, ಗ್ರಾಮ ಸಂಪರ್ಕ ರಸ್ತೆ ಸೇರಿ ಅಗತ್ಯ ಮೂಲಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಜನಪರ ಕೆಲಸಗಳನ್ನು ಮಾಡಿದ್ದಾರೆ. ಗ್ರಾಮೀಣ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ಹೊಂದಿರುವ ಇಂತಹ ನಾಯಕರು ರಾಜಕೀಯದಲ್ಲಿ ಹಿಂದುಳಿಯಬಾರದು. ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅವರ ಸಮಸ್ಯೆಗಳಿಗೆ ಧ್ವನಿಯಾಗುವ ಅಗತ್ಯವಿದೆ. ಆದ್ದರಿಂದ ರಾಮಸ್ವಾಮಿ ಅವರು ಮುಂದಿನ ರಾಜಕೀಯ ಹೆಜ್ಜೆಯ ಕುರಿತು ಸೂಕ್ತ ನಿರ್ಧಾರ ಕೈಗೊಂಡು ಸಕ್ರಿಯ ರಾಜಕಾರಣಕ್ಕೆ ಮರಳಬೇಕೆಂದು ಮನವಿ ಮಾಡಿದರು.

ಕಿಸಾನ್ ರೈತ ಸಂಘದ ಜಿಲ್ಲಾಧ್ಯಕ್ಷ ಯೋಗಣ್ಣ ಮಾತನಾಡಿ, ಪ್ರಸಕ್ತ ರಾಜಕೀಯ ವಿದ್ಯಮಾನಗಳನ್ನು ಗಮನಿಸಿದರೆ ಪ್ರಾಮಾಣಿಕತೆ, ಸರಳತೆ ಹಾಗು ಜನಪರ ಕಾಳಜಿ ಹೊಂದಿರುವ ರಾಜಕಾರಣಿಗಳ ಅಗತ್ಯ ಹಿಂದೆಂದಿಗಿಂತಲೂ ಹೆಚ್ಚಾಗಿದೆ. ಎ.ಟಿ.ರಾಮಸ್ವಾಮಿ ಅವರು ಇಂತಹ ಗುಣಗಳನ್ನು ಹೊಂದಿರುವ ನಾಯಕರಾಗಿದ್ದು, ರೈತರು, ಗ್ರಾಮೀಣ ಜನರು ಸೇರಿ ವಿವಿಧ ವರ್ಗದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ಹೊಂದಿದ್ದಾರೆ. ಹೀಗಾಗಿ ಅವರು ಸಕ್ರಿಯ ರಾಜಕಾರಣಕ್ಕೆ ಮರಳಿ ಜನರ ಪರವಾಗಿ ಧ್ವನಿ ಎತ್ತಬೇಕೆಂದು ಒತ್ತಾಯಿಸಿದರು.

ಮುಖಂಡರಾದ ಮಂಜುನಾಥ್ ರಾಜೇ ಅರಸ್, ಕೃಷ್ಣ, ಈರಪ್ಪ, ದೊಡ್ಡಹಳ್ಳಿ ಮಂಜು, ರಾಮಶೇಷು, ಧರ್ಮೇಗೌಡ, ಶಿವಣ್ಣ ಸೇರಿದಂತೆ ಹೋಬಳಿಯ ವಿವಿಧ ಗ್ರಾಮಗಳ ಗ್ರಾಮಸ್ಥರು, ಅಭಿಮಾನಿಗಳು ಹಾಗೂ ಮುಖಂಡರು ಇದ್ದರು.

# ಕ್ರಿಕೆಟ್ ಆಡುತ್ತಿದ್ದಾಗ ಕುಸಿದು ಬಿದ್ದು ಯುವಕ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಸ್ನೇಹಿತರ ಜೊತೆ ಕ್ರಿಕೆಟ್ ಆಡುತ್ತಿದ್ದಾಗ ಕುಸಿದುಬಿದ್ದ ಯುವಕ ಮೃತಪಟ್ಟಿರುವ ಘಟನೆ ನಡೆದಿದೆ.

ನಗರದ ಕೆಂಗಲ್ ಸಿದ್ದೇಶ್ವರ ಬಡಾವಣೆ ನಿವಾಸಿ, ಉದ್ಯಮಿ ಅರವಿಂದ್ ಜೈನ್ ಹಾಗು ರಾಣಿ ಸಂಗ್ರಾಣಿ ದಂಪತಿ ಪುತ್ರ ಮಯಾಂಕ್ ಜೈನ್ (19) ಮೃತ. ಬೆಂಗಳೂರಿನ ಆಚಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ಪ್ರಥಮ ಸೆಮಿಸ್ಟರ್



ವ್ಯಾಸಂಗ ಮಾಡುತ್ತಿದ್ದ ಯುವಕ ರಜೆ ಹಿನ್ನೆಲೆಯಲ್ಲಿ ಶನಿವಾರ ಮನೆಗೆ ಬಂದಿದ್ದ. ಸ್ನೇಹಿತರ ಜೊತೆ ಕ್ರಿಕೆಟ್ ಆಡಲು ಭಾನುವಾರ ತಿಪಟೂರಿಗೆ ತೆರಳಿದ್ದ. ಕ್ರಿಕೆಟ್ ಆಟವಾಡುತ್ತಿದ್ದಾಗ ದಿಢೀರ್ ಕುಸಿದು ಬಿದ್ದಿದ್ದಾನೆ. ತಕ್ಷಣವೇ ಸಮೀಪದ ಆಸ್ಪತ್ರೆಗೆ ದಾಖಲಿಸಿದರೂ ಪ್ರಯೋಜನವಾಗಿಲ್ಲ. ನಗರ ಹೊರವಲಯದ ಜೈನ ಮುಕ್ತಿ ಧಾಮದಲ್ಲಿ ಅಂತ್ಯಕ್ರಿಯೆ ನಡೆಯಿತು.

# ಮಹಿಳೆ ಕೊರಳಿಂದ ಚಿನ್ನದ ಸರ ಕಿತ್ತು ಪರಾರಿ

ಚನ್ನರಾಯಪಟ್ಟಣ: ಕೊಟ್ಟಿಗೆಯಲ್ಲಿ ಹಾಲು ಕರೆಯುತ್ತಿದ್ದಾಗ ಹಿಂದಿನಿಂದ ಬಂದ ಪರಿಚಿತ ವ್ಯಕ್ತಿ ಮಹಿಳೆ ಕೊರಳಿಂದ ಅಂದಾಜು 3 ಲ.ರೂ. ಮೌಲ್ಯದ ಚಿನ್ನದ ಮಾಂಗಲ್ಯ ಸರ ಕಿತ್ತುಕೊಂಡು ಹೋಗಿರುವ ಘಟನೆ ತಾಲ್ಲೂಕಿನ ಮಲ್ಲನಘಟ್ಟ ಗ್ರಾಮದಲ್ಲಿ ಇತ್ತೀಚೆಗೆ ನಡೆದಿದೆ. ಗ್ರಾಮದ ಮಂಜೇಗೌಡ ಎಂಬುವವರ ಪತ್ನಿ ಚಿಕ್ಕಮ್ಮ ಅವರ ಸರ ಕಳುವಾಗಿದೆ. ಬಡಕನಹಳ್ಳಿಯ ಆದರ್ಶ್ ಎಂಬಾತ ಸರ ಕದ್ದಿದ್ದಾನೆ ಎನ್ನಲಾಗಿದೆ.

ಆ. 28ರ ಸಂಜೆ 6.30ರ ಸಮಯದಲ್ಲಿ ವಾಸದ ಮನೆಯ ಪಕ್ಕದಲ್ಲಿರುವ ದನದ ಕೊಟ್ಟಿಗೆಯಲ್ಲಿ ಎಮ್ಮೆಯ ಹಾಲು ಕರೆಯುತ್ತಿದ್ದಾಗ ಹಿಂದಿನಿಂದ ಬಂದ ಆದರ್ಶ್ ಕೊರಳಿಂದ 35 ಗ್ರಾಂ ತೂಕದ ಚಿನ್ನದ ಸರ ಕಿತ್ತುಕೊಂಡು ಓಡಿದ್ದಾನೆ. ಪರಿಚಿತ ವ್ಯಕ್ತಿಯೇ ಸರ ಕದ್ದಿದ್ದರಿಂದ ಮಂಜೇಗೌಡ ಅವರು ಆದರ್ಶ್‌ನ ಮನೆಗೆ ಹೋಗಿ ಕೇಳಿದರೂ ಸರ ಕದ್ದಿಲ್ಲವೆಂದು ಹೇಳಿದ್ದಾನೆ. ಆತನನ್ನು ಕೂಡಲೇ ಬಂಧಿಸಿ ತಮಗೆ ನ್ಯಾಯ ದೊರಕಿಸಿಕೊಡಬೇಕೆಂದು ನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-01

1807: ಬ್ರಿಟಿಷ್ ಸಂಸತ್ತಿನಲ್ಲಿ ಗುಲಾಮರ ವ್ಯಾಪಾರವನ್ನು ನಿಷೇಧಿಸುವ ಕಾಯ್ದೆ ಜಾರಿಗೆ ಬಂತು.

1956: ಭಾರತದ ರಾಜ್ಯ ಪುನರ್ ವಿಂಗಡಣೆ ಕಾಯ್ದೆಯ ಅನ್ವಯ ಹಲವು ರಾಜ್ಯಗಳ ಆಡಳಿತಾತ್ಮಕ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗಳು ಜಾರಿಗೆ ಬಂದವು.

1960: ಗಾಬೋನ್ ದೇಶವು ಫ್ರಾನ್ಸ್‌ನಿಂದ ಸ್ವಾತಂತ್ರ್ಯ ಪಡೆದ ನಂತರ ಮೊದಲ ಸ್ವಾತಂತ್ರ್ಯ ದಿನಾಚರಣೆ ನಡೆಸಿತು.

1969: ಲಿಬಿಯಾದಲ್ಲಿ ಮುಅಮ್ಮರ್ ಗಾಫಿ ನೇತೃತ್ವದಲ್ಲಿ ರಾಜಮನೆತನವನ್ನು ಉರುಳಿಸಿ ಹೊಸ ಆಡಳಿತ ಸ್ಥಾಪಿಸಲಾಯಿತು.

1970: ಅಮೆರಿಕದ ಖ್ಯಾತ ಪರಿಸರ ಸಂರಕ್ಷಣಾ ಕಾಯ್ದೆಯಾದ ರಾಷ್ಟ್ರೀಯ ಪರಿಸರ ನೀತಿ ಕಾಯ್ದೆ ಜಾರಿಗೆ ಬಂತು.

1991: ಉಜ್ಬೇಕಿಸ್ತಾನ್ ಸೋವಿಯತ್ ಒಕ್ಕೂಟದಿಂದ ಸ್ವಾತಂತ್ರ್ಯ ಘೋಷಿಸಿತು.

2004: ರಷ್ಯಾದ ಬೆಸ್ಲಾನ್ ಶಾಲೆಯಲ್ಲಿ ಉಗ್ರರು ನಡೆಸಿದ ಒತ್ತೆಯಾಳು ಪ್ರಕರಣ ಆರಂಭವಾಯಿತು; ಈ ದುರಂತದಲ್ಲಿ 300ಕ್ಕೂ ಹೆಚ್ಚು ಮಂದಿ ಮೃತಪಟ್ಟರು.

# ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಭಾರೀ ಏರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಾನೂನು ಎಷ್ಟೇ ಬಿಗಿಯಾದರೂ, ಅರಿವು ಕಾರ್ಯಕ್ರಮಗಳು ನಡೆದರೂ ಜಿಲ್ಲೆಯಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಹೆಚ್ಚುತ್ತಲೇ ಇದೆ ಎನ್ನುವುದು ಸರ್ಕಾರದ ವರದಿಯಿಂದ ಬಹಿರಂಗವಾಗಿದೆ.

2023ರ ಏಪ್ರಿಲ್‌ನಿಂದ ಡಿಸೆಂಬರ್ ವರೆಗೆ 128 ಪ್ರಕರಣಗಳು ದಾಖಲಾಗಿದ್ದರೆ, 2024ರಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಕ್ಕೆ ಸಂಬಂಧಿಸಿ 157 ಪ್ರಕರಣಗಳು ದಾಖಲಾಗಿದ್ದವು. 2026ರ ಜನವರಿಯಿಂದ ಜುಲೈ ಅಂತ್ಯದವರೆಗೆ ಬರೋಬ್ಬರಿ 525 ಪ್ರಕರಣಗಳು ದಾಖಲಾಗಿವೆ.

ವಿಧಾನಸಭೆ ಅಧಿವೇಶನದಲ್ಲಿ ಅರಕಲಗೂಡು ಶಾಸಕ ಎ. ಮಂಜು ಅವರು ಕೇಳಿದ ಪ್ರಶ್ನೆಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನೀಡಿದ ಉತ್ತರದಲ್ಲಿ ಈ ಅಂಕಿ-ಅಂಶಗಳು ಬಹಿರಂಗವಾಗಿವೆ.

2025ರಲ್ಲಿ ಈ ಸಂಖ್ಯೆ 135ಕ್ಕೆ ಇಳಿಕೆಯಾಗಿತ್ತು. ಆದರೆ 2026ರ ಮೊದಲ ಏಳು ತಿಂಗಳಲ್ಲೇ 525 ಪ್ರಕರಣಗಳು ದಾಖಲಾಗಿರುವುದು ಆತಂಕಕ್ಕೆ ಕಾರಣವಾಗಿದೆ.

ಇದೇ ಅವಧಿಯಲ್ಲಿ ಮಕ್ಕಳ ಮೇಲಿನ ಅತ್ಯಾಚಾರ ಪ್ರಕರಣಗಳಲ್ಲೂ ಏರಿಕೆ ಕಂಡುಬಂದಿದೆ. 2024ರಲ್ಲಿ 18 ಹಾಗೂ 2025ರಲ್ಲಿ 19 ಅತ್ಯಾಚಾರ ಪ್ರಕರಣಗಳು ದಾಖಲಾಗಿದ್ದರೆ, 2026ರ ಜುಲೈ ಅಂತ್ಯದ ವೇಳೆಗೆ 57 ಪ್ರಕರಣಗಳು ದಾಖಲಾಗಿವೆ. 2023ರ ಏಪ್ರಿಲ್ 1ರಿಂದ 2026ರ ಜುಲೈ 31ರ ವರೆಗೆ ಜಿಲ್ಲೆಯಲ್ಲಿ ಮಕ್ಕಳ



ಮೇಲಿನ ಲೈಂಗಿಕ ದೌರ್ಜನ್ಯಕ್ಕೆ ಸಂಬಂಧಿಸಿ ಒಟ್ಟು 945 ಪ್ರಕರಣಗಳು ದಾಖಲಾಗಿವೆ.

## ಪ್ರತಿ ಠಾಣೆಯಲ್ಲೂ ಇದೇ ರಗಳೆ

ಜಿಲ್ಲೆಯ ಪ್ರತಿ ಪೊಲೀಸ್ ಠಾಣೆಯಲ್ಲೂ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಹಾಗೂ ಅತ್ಯಾಚಾರದ ಪ್ರಕರಣಗಳೇ ಹೆಚ್ಚು ಸದ್ದು ಮಾಡುತ್ತಿವೆ. ಠಾಣಾಧಿಕಾರಿಗಳು ಈ ಸಂಬಂಧ ಭಾರೀ ಆತಂಕ ವ್ಯಕ್ತಪಡಿಸುತ್ತಿದ್ದಾರೆ. ನ್ಯಾಯಾಲಯಕ್ಕೆ ಹಾಜರುಪಡಿಸುವ ಬಹುತೇಕ ವಿಚಾರಣಾಧೀನ ಖೈದಿಗಳಲ್ಲಿ ಪೋಕ್ಸೋ ಆರೋಪಿಗಳೇ ಇರುತಾರೆಂಬುದು ಆತಂಕದ ಸಂಗತಿ.

ಅಪರಾಧ ಪ್ರಕರಣಗಳ ಹೆಚ್ಚಳಕ್ಕೆ ಪೊಲೀಸ್ ಇಲಾಖೆ ಹಾಗು ರಾಜ್ಯ ಸರ್ಕಾರದ ಲೋಪಗಳೇ ಕಾರಣ ಎಂದು ಶಾಸಕ ಎ. ಮಂಜು ಆರೋಪಿಸಿದ್ದಾರೆ. ದುರ್ಬಲ ವರ್ಗದ ಜನರು ಇಂತಹ ಅಪರಾಧಗಳಿಂದ ಹೆಚ್ಚು ಬಾಧಿತರಾಗುತ್ತಿದ್ದಾರೆ. ಅಪರಾಧಿಗಳ ಮೇಲೆ ಪೊಲೀಸರು ನಿರಂತರ ನಿಗಾ ವಹಿಸಿ ಕಠಿಣ ಕ್ರಮ ಕೈಗೊಂಡರೆ ಅಪರಾಧ ಪ್ರಮಾಣ ಕಡಿಮೆಯಾಗಲಿದೆ ಎಂದು ಹೇಳಿದ್ದಾರೆ.

ನೈತಿಕ ಮೌಲ್ಯಗಳ ಕುಸಿತ ಹಾಗೂ ನೈತಿಕ ಶಿಕ್ಷಣದ ಕೊರತೆಯೂ ಅಪರಾಧಗಳ ಹೆಚ್ಚಳಕ್ಕೆ ಕಾರಣವಾಗುತ್ತಿದೆ. ವಿದ್ಯಾವಂತರೂ ವಿವಿಧ ಕಾರಣಗಳಿಂದ ಅಪರಾಧ ಚಟುವಟಿಕೆಗಳಲ್ಲಿ ತೊಡಗುತ್ತಿರುವುದು ಕಳವಳಕಾರಿ ಬೆಳವಣಿಗೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

## ಪ್ರೀತಿ-ಪ್ರೇಮವೆಂಬ ಮೋಸದ ಬಲೆ

ಮಕ್ಕಳಲ್ಲಿ ಹೆಚ್ಚುತ್ತಿರುವ ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಬಳಕೆ ಅವಘಡಕ್ಕೆ ಕಾರಣವಾಗುತ್ತಿದೆ. ಪ್ರೀತಿ-ಪ್ರೇಮದ ಆಕರ್ಷಣೆ ಸೇರಿ ಹಲವು ಕಾರಣಗಳು ಇಂತಹ ಪ್ರಕರಣಗಳಿಗೆ ಕಾರಣವಾಗುತ್ತಿವೆ. ಬಡ ಕುಟುಂಬಗಳು ಹಾಗೂ ಏಕ ಪೋಷಕರ ಕುಟುಂಬಗಳ ಮಕ್ಕಳನ್ನು ಪ್ರೀತಿಯ ನೆಪದಲ್ಲಿ ಸೆಳೆದು ಬಳಿಕ ಕೈಬಿಡುವ ಪ್ರಕರಣಗಳು ನಡೆಯುತ್ತಿವೆ. ಮಕ್ಕಳ ಮೇಲೆ ಸಾಮಾಜಿಕ ಜಾಲತಾಣಗಳ ಪ್ರಭಾವ ನಿಯಂತ್ರಣ ಮೀರುತ್ತಿದೆ.

## ಜಾಗೃತಿಗೆ ಅನುಮತಿಯ ಬಲೆ

ರಸ್ತೆ ಸುರಕ್ಷತೆ, ಲೈಂಗಿಕ ದೌರ್ಜನ್ಯ ತಡೆ, ಆರೋಗ್ಯ ಜಾಗೃತಿ ಮೂಲಕ ಮಕ್ಕಳು ಹಾಗೂ ಮಹಿಳೆಯರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ನಿರಂತರವಾಗಿ ನಡೆಯುತ್ತವೆ. ಜಿಲ್ಲೆಯಲ್ಲಿ ಅನೇಕ ಮಹಿಳಾ ಸಂಘ ಸಂಸ್ಥೆಗಳು ಇಂತಹ ಸಮಾರಂಭಗಳನ್ನು ಆಯೋಜಿಸಿಕೊಂಡು ಬರುತ್ತಿವೆ. ಆದರೆ ಸರ್ಕಾರದ ಇತ್ತೀಚಿನ ಆದೇಶ ಅದಕ್ಕೆ ವ್ಯತಿರಿಕ್ತವಾಗಿದೆ. ಯಾವುದೇ ಸರ್ಕಾರಿ ಶಾಲೆಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕೆಂದರೆ ಜಿಲ್ಲಾಧಿಕಾರಿ ಅನುಮತಿ ಕಡ್ಡಾಯವಾಗಿದೆ. ಮೊದಲೆಲ್ಲಾ ಶಾಲಾ ಮುಖ್ಯ ಶಿಕ್ಷಕರೇ ಅನುಮತಿ ನೀಡುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಮಕ್ಕಳನ್ನು ಇಂತಹ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಳ್ಳಲು ಭಾರೀ ತೊಂದರೆಯಾಗುತ್ತಿದೆ ಎಂದು ಮಹಿಳಾ ಸಂಘಟನೆಯ ಪದಾಧಿಕಾರಿಯೊಬ್ಬರು ಹೇಳಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248